**All India Radio: Bangalore**
**National Bulletin In Kannada**
**07.09.2026  1.10 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**07.09.2026  1.10 pm**

**<>><><*><><<>**

ಮುಖ್ಯಾಂಶಗಳು

**೧. ಗುಜರಾತ್, ಮಹಾರಾಷ್ಟ್ರಕ್ಕೆ ನಾಳೆ ಪ್ರಧಾನಿ ನರೇಂದ್ರ ಮೋದಿ ಭೇಟಿ; ೩೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ**

**೨. ಗೋವಾದಲ್ಲಿ ೨೮ನೇ ಪಶ್ಚಿಮ ವಲಯ ಮಂಡಳಿ ಸಭೆ ; ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆ**

**೩. ನೇಪಾಳ ಪ್ರವಾಹ ದುರಂತ ; ಮೃತರ ಗೌರವಾರ್ಥ ನೇಪಾಳದಲ್ಲಿಂದು ರಾಷ್ಟ್ರೀಯ ಶೋಕಾಚರಣೆ**

**೪. ವಾರಣಸಿಯಲ್ಲಿ ನಾಡಿದ್ದು ೯ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆಗೆ ಚಾಲನೆ ; ನಮ್ಮ ಅಂಗನವಾಡಿ ನಮ್ಮ ಜವಾಬ್ದಾರಿ ಘೋಷವಾಕ್ಯ**

**೫. ಯುಎಸ್ ಓಪನ್ ಟೆನಿಸ್ ; ಹಾಲಿ ಚಾಂಪಿಯನ್ ಅರಿನಾ ಸಬಲೆಂಕಾ ಮತ್ತು ಕಾರ್ಲೋಸ್ ಅಲ್ಕರಾಜ್ ಕ್ವಾರ್ಟರ್ ಫೈನಲ್‌ಗೆ ಲಗ್ಗೆ**

**<>><><*><><<>**

ಪ್ರಧಾನಿ ನರೇಂದ್ರ ಮೋದಿ ನಾಳೆ ಗುಜರಾತ್ ಮತ್ತು ಮಹಾರಾಷ್ಟ್ರ ರಾಜ್ಯಕ್ಕೆ ಭೇಟಿ ನೀಡಲಿದ್ದು, ವಡೋದರದಲ್ಲಿ ೩೫ ಸಾವಿರ ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ಹಲವು ಮೂಲಸೌಕರ್ಯ ಹಾಗೂ ಅಭಿವೃದ್ಧಿ ಯೋಜನೆಗಳಿಗೆ ಚಾಲನೆ ನೀಡಲಿದ್ದಾರೆ. ಇದರ ಭಾಗವಾಗಿ ೨೦ ಸಾವಿರದ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾದ ಪಶ್ಚಿಮ ಮೀಸಲಾದ ಸರಕು ಸಾಗಾಣೆ ಕಾರಿಡಾರ್‌ನ ೩೨೬ ಕಿಲೋಮೀಟರ್ ವ್ಯಾಪ್ತಿಯ ಮೂರು ಪ್ರಮುಖ ಮಾರ್ಗಗಳನ್ನು ಪ್ರಧಾನಿ ಉದ್ಘಾಟಿಸಲಿದ್ದಾರೆ. ಇದರ ಜೊತೆಗೆ ಹಲವು ಸರಕು ರೈಲು ಸೇವೆಗಳಿಗೆ ಹಾಗೂ ವಡೋದರ-ತಾಂಡ ನಡುವಿನ ನೂತನ ರೈಲು ಸೇವೆಗೆ ಹಸಿರು ನಿಶಾನೆ ತೋರಲಿದ್ದಾರೆ. ಇದರ ಜೊತೆಗೆ ೯

ಸಾವಿರದ ೭೦೦ ಕೋಟಿ ರೂಪಾಯಿ ಮೌಲ್ಯದ ಮೂರು ರೈಲ್ವೆ ಯೋಜನೆಗಳು, ೧ ಸಾವಿರದ ೭೮೦ ಕೋಟಿ ರೂಪಾಯಿ ವೆಚ್ಚದ ರಾಷ್ಟ್ರೀಯ ಹೆದ್ದಾರಿ ಯೋಜನೆಗಳು ಹಾಗೂ ಗುಜರಾತ್ ಸರ್ಕಾರದ ೨ ಸಾವಿರದ ೬೦೦ ಕೋಟಿ ರೂಪಾಯಿ ಮೌಲ್ಯದ ವಿವಿಧ ಕಾಮಗಾರಿಗಳಿಗೆ ಶಂಕುಸ್ಥಾಪನೆ ನೆರವೇರಿಸಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ಮಹಾರಾಷ್ಟ್ರ ಪ್ರವಾಸದ ಭಾಗವಾಗಿ ಪ್ರಧಾನಿ ಮುಂಬೈನಲ್ಲಿ ನಡೆಯಲಿರುವ ಜಾಗತಿಕ ಫಿನ್‌ಟೆಕ್ ಉತ್ಸವ - ೨೦೨೬ ಅನ್ನು ಉದ್ಘಾಟಿಸಿ ಭಾಷಣ ಮಾಡಲಿದ್ದಾರೆ.

**<>><><*><><<>**

ಗೋವಾದ ಪಣಜಿಯಲ್ಲಿಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಅಧ್ಯಕ್ಷತೆಯಲ್ಲಿ ೨೮ನೇ ಪಶ್ಚಿಮ ವಲಯ ಮಂಡಳಿ ಸಭೆ ನಡೆಯುತ್ತಿದೆ.  ಗೋವಾ, ಗುಜರಾತ್ ಹಾಗೂ ಮಹಾರಾಷ್ಟ್ರ ರಾಜ್ಯಗಳ ಮುಖ್ಯಮಂತ್ರಿಗಳು, ಹಿರಿಯ ಸಚಿವರು ಸೇರಿದಂತೆ ದಾದ್ರಾ ನಗರ ಹವೇಲಿ ಹಾಗೂ ದಮನ್ ದಿಯು ಪ್ರತಿನಿಧಿಗಳು ಸಭೆಯಲ್ಲಿ ಭಾಗವಹಿಸಿದ್ದಾರೆ.

ಈ ವೇಳೆ ಕೇಂದ್ರ ಸರ್ಕಾರ ಹಾಗೂ ಸದಸ್ಯ ರಾಜ್ಯಗಳ ವಿವಿಧ ಪ್ರಮುಖ ವಿಷಯಗಳ ಬಗ್ಗೆ ಚರ್ಚೆ ನಡೆಸಲಾಗುತ್ತಿದೆ. ಎರಡು ಅಥವಾ ಎರಡಕ್ಕಿಂತ ಹೆಚ್ಚು ರಾಜ್ಯಗಳು ಮತ್ತು ಕೇಂದ್ರ ಸರ್ಕಾರಕ್ಕೆ ಸಂಬಂಧಿಸಿದ ವಿಷಯಗಳನ್ನು ಚರ್ಚಿಸಲು ಮತ್ತು ಪರಸ್ಪರ ಸಹಕಾರ ಬಲಪಡಿಸಲು ಈ ವಲಯ ಮಂಡಳಿಯು ಉತ್ತಮ ವೇದಿಕೆ ಕಲ್ಪಿಸುತ್ತದೆ. ಆಡಳಿತಾತ್ಮಕ ಮಟ್ಟದಲ್ಲಿ ಬಗೆಹರಿಯದ ಪ್ರಮುಖ ವಿಷಯಗಳನ್ನು ಈ ಸಭೆಯಲ್ಲಿ ಪರಿಶೀಲನೆಗೆ ತೆಗೆದುಕೊಳ್ಳಲಾಗುತ್ತದೆ. ಸಭೆಯ ನಂತರ ಕೇಂದ್ರ ಗೃಹ ಸಚಿವ ಅಮಿತ್ ಶಾ, ಗೋವಾ ಪೊಲೀಸರಿಗೆ ಪ್ರತಿಷ್ಠಿತ ರಾಷ್ಟ್ರಪತಿ ಪೊಲೀಸ್ ಕಲರ್ ಗೌರವವನ್ನು ಪ್ರದಾನ ಮಾಡಲಿದ್ದಾರೆ.

**<>><><*><><<>**

ಆಗಸ್ಟ್ ೨೬ ರಂದು ನೇಪಾಳದ ರಸುವಾ ಜಿಲ್ಲೆಯ ಭೋಟೆ ಕೋಸಿ ನದಿ ಪ್ರದೇಶದಲ್ಲಿ ಸಂಭವಿಸಿದ ಭೀಕರ ಪ್ರವಾಹದಲ್ಲಿ ಮೃತಪಟ್ಟವರ ಸ್ಮರಣಾರ್ಥ ಹಾಗೂ ಗೌರವಾರ್ಥವಾಗಿ ನೇಪಾಳದಲ್ಲಿ ಇಂದು ರಾಷ್ಟ್ರೀಯ ಶೋಕಾಚರಣೆ ನಡೆಯುತ್ತಿದೆ. ಸೆಪ್ಟೆಂಬರ್ ೩ ರಂದು ನಡೆದ ಸಚಿವ ಸಂಪುಟ ಸಭೆಯ ನಿರ್ಧಾರದಂತೆ ಈ ಶೋಕಾಚರಣೆ ಕೈಗೊಳ್ಳಲಾಗಿದ್ದು, ನೇಪಾಳದಾದ್ಯಂತ ಸರ್ಕಾರಿ ಕಚೇರಿಗಳು ಹಾಗೂ ವಿದೇಶಗಳಲ್ಲಿರುವ ನೇಪಾಳಿ ರಾಯಭಾರ ಕಚೇರಿಗಳಲ್ಲಿ ರಾಷ್ಟ್ರಧ್ವಜವನ್ನು ಅರ್ಧಮಟ್ಟಕ್ಕೆ ಹಾರಿಸಲಾಯಿತು. ಪ್ರವಾಹ ದುರಂತದಲ್ಲಿ ಇದುವರೆಗೆ ೧ ಸಾವಿರದ ೩೫೩ ಮೃತದೇಹಗಳನ್ನು ಹೊರತೆಗೆಯಲಾಗಿದ್ದು, ವಿದೇಶಿಗರು ಸೇರಿದಂತೆ ೩ ಸಾವಿರದ ೯೯೨ಕ್ಕೂ ಹೆಚ್ಚು ಜನರು

ಕಾಣೆಯಾಗಿದ್ದಾರೆ ಎಂದು ನೇಪಾಳ ಪೊಲೀಸರು ತಿಳಿಸಿದ್ದಾರೆ. ಈ ಭೀಕರ ದುರಂತದ ಹಿನ್ನೆಲೆಯಲ್ಲಿ ದೇಶವನ್ನು ಉದ್ದೇಶಿಸಿ ಸಂದೇಶ ನೀಡಿರುವ ನೇಪಾಳ ಪ್ರಧಾನಮಂತ್ರಿ ಬಾಲೇಂದ್ರ ಶಾ, ಪ್ರವಾಹದಿಂದ ಸಂಕಷ್ಟಕ್ಕೆ ಸಿಲುಕಿರುವ ಹಿರಿಯ ನಾಗರಿಕರು ಹಾಗೂ ಸಂತ್ರಸ್ತರಿಗೆ ಸರ್ಕಾರ ಸಂಪೂರ್ಣ ಬೆಂಬಲವಾಗಿ ನಿಲ್ಲಲಿದೆ ಎಂದು ಭರವಸೆ ನೀಡಿದ್ದಾರೆ.  ರಕ್ಷಣಾ ಪಡೆಗಳು ಹಾಗೂ ಭದ್ರತಾ ಸಂಸ್ಥೆಗಳು ಕಾಣೆಯಾದವರ ಶೋಧಕ್ಕಾಗಿ ಕಾರ್ಯಾಚರಣೆ ತೀವ್ರಗೊಳಿಸಿವೆ ಎಂದು ತಿಳಿಸಿದ್ದಾರೆ. ಭೋಟೆ ಕೋಸಿ ಹಾಗೂ ತ್ರಿಶೂಲಿ ನದಿ ಪಾತ್ರದಲ್ಲಿರುವ ಜಲವಿದ್ಯುತ್ ಯೋಜನೆಗಳ ಬಳಿ ಕಾಣೆಯಾಗಿರುವ ನೂರಾರು ಸಿಬ್ಬಂದಿಯ ಶೋಧ ಮತ್ತು ರಕ್ಷಣಾ ಕಾರ್ಯ ನಿರಂತರವಾಗಿ ಮುಂದುವರಿದಿದೆ.

**<>><><*><><<>**

ನವದೆಹಲಿಯ ಸತ್ಯ ನಿಕೇತನ್ ಪ್ರದೇಶದಲ್ಲಿ ಬಹುಮಹಡಿ ಕಟ್ಟಡ ಕುಸಿದ ಸ್ಥಳಕ್ಕೆ ದೆಹಲಿ ಮುಖ್ಯಮಂತ್ರಿ ರೇಖಾ ಗುಪ್ತಾ ಇಂದು ಮತ್ತೆ ಭೇಟಿ ನೀಡಿ, ಪರಿಹಾರ ಕಾರ್ಯಗಳು ಹಾಗೂ ಸುರಕ್ಷತಾ ಕ್ರಮಗಳನ್ನು ಪರಿಶೀಲಿಸಿದರು.. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಘಟನಾ ಸ್ಥಳದಿಂದ ಶೇಕಡಾ ೮೦ ರಷ್ಟು ಅವಶೇಷಗಳು ತೆರವುಗೊಳಿಸಲಾಗಿದೆ ಎಂದು ತಿಳಿಸಿದರು. ದುರಂತದಲ್ಲಿ ಸಿಲುಕಿದ್ದ ೧೨ ಜನರಲ್ಲಿ ಆರು ಮಂದಿ ಮೃತಪಟ್ಟಿದ್ದಾರೆ. ಇನ್ನುಳಿದ ಆರು ಮಂದಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದು ಚೇತರಿಸಿಕೊಳ್ಳುತ್ತಿದ್ದಾರೆ. ಸಂತ್ರಸ್ತ ವಿದ್ಯಾರ್ಥಿಗಳ ಪೋಷಕರೊಂದಿಗೆ ಸರ್ಕಾರವು ನಿರಂತರ ಸಂಪರ್ಕದಲ್ಲಿದೆ ಎಂದು ಅವರು ತಿಳಿಸಿದರು. ಕಟ್ಟಡ ಮಾಲೀಕರ ಬೇಜವಾಬ್ದಾರಿತನವೇ ಈ ದುರಂತಕ್ಕೆ ಕಾರಣವಾಗಿದ್ದು, ಅವರ ವಿರುದ್ಧ ಈಗಾಗಲೇ ಎಫ್‌ಐಆರ್ ದಾಖಲಿಸಿ ಕಾನೂನು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಹೇಳಿದರು. ಈ ವ್ಯಾಪ್ತಿಯಲ್ಲಿರುವ ಇತರ ಅಪಾಯಕಾರಿ ಹಾಗೂ ಅಕ್ರಮ ಐದು ಮಹಡಿಗಳ ಕಟ್ಟಡಗಳನ್ನು ಗುರುತಿಸಿ ನೆಲಸಮಗೊಳಿಸಲು ನಿರ್ದೇಶನ ನೀಡಲಾಗಿದೆ.  ಘಟನೆಗೆ ಕಾರಣರಾದ ಹಾಗೂ ನಿರ್ಲಕ್ಷ್ಯ ವಹಿಸಿದ ಅಧಿಕಾರಿಗಳನ್ನು ತಕ್ಷಣವೇ ಸೇವೆಯಿಂದ ಅಮಾನತುಗೊಳಿಸಲಾಗುವುದು ಎಂದು ತಿಳಿಸಿದ ಅವರು, ದೆಹಲಿ ನಿವಾಸಿಗಳ ಸುರಕ್ಷತೆಯ ವಿಷಯದಲ್ಲಿ ಯಾವುದೇ ರಾಜಿ ಇಲ್ಲ ಎಂದು ಸ್ಪಷ್ಟಪಡಿಸಿದರು.

**<>><><*><><<>**

ಕೇಂದ್ರ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ವತಿಯಿಂದ ೯ನೇ ರಾಷ್ಟ್ರೀಯ ಪೋಷಣ್ ಮಾಸಾಚರಣೆ-೨೦೨೬ ಕಾರ್ಯಕ್ರಮಕ್ಕೆ ಇದೇ ೯ ರಂದು ವಾರಣಸಿಯಲ್ಲಿ ಚಾಲನೆ

ದೊರೆಯಲಿದೆ. ಮಿಷನ್ ಸಕ್ಷಮ್ ಅಂಗನವಾಡಿ ಮತ್ತು ಪೋಷಣ್ ೨.೦ ಅಡಿಯಲ್ಲಿ ಪರಿಷ್ಕೃತ ಮಾರ್ಗಸೂಚಿಗಳೊಂದಿಗೆ ಈ ಬಾರಿಯ ಅಭಿಯಾನ ಆರಂಭವಾಗಲಿದ್ದು, ಬಿಸಿಯೂಟ ಎಸ್‌ಎಂಪಿ ಮೆನು ಬೋರ್ಡ್‌ಗಳು ಮತ್ತು ಅಂಗನವಾಡಿ ನಿರ್ವಹಣಾ ಸಮಿತಿಗಳ ಸ್ಥಾಪನೆಯನ್ನು ಕಡ್ಡಾಯಗೊಳಿಸಲಾಗಿದೆ. ೨೦೪೭ರ ವೇಳೆಗೆ ವಿಕಸಿತ ಭಾರತ ನಿರ್ಮಿಸುವ ನಿಟ್ಟಿನಲ್ಲಿ ಸುಪೋಷಿತ ಭಾರತ ಹೊಂದುವ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಪರಿಕಲ್ಪನೆಯಂತೆ ಆರಂಭವಾದ ಈ ಆಂದೋಲನವನ್ನು ಕೇಂದ್ರ ಸಚಿವೆ ಅನ್ನಪೂರ್ಣ ದೇವಿ ನಮ್ಮ ಅಂಗನವಾಡಿ ನಮ್ಮ ಜವಾಬ್ದಾರಿ ಎಂಬ ಘೋಷವಾಕ್ಯದೊಂದಿಗೆ ಉದ್ಘಾಟಿಸಲಿದ್ದಾರೆ. ಈ ಬಾರಿಯ ಅಭಿಯಾನ ಪ್ರಮುಖವಾಗಿ ಆಹಾರ ವೈವಿಧ್ಯತೆ, ತಾಜಾ ಬಿಸಿಯೂಟ, ಸಮುದಾಯ ಸಹಭಾಗಿತ್ವ ಮತ್ತು ಬಾಲ್ಯದ ಸಮಗ್ರ ವಿಕಾಸಕ್ಕಾಗಿ ಪೋಷಣೆ ಹಾಗೂ ಆರಂಭಿಕ ಶಿಕ್ಷಣ ಎಂಬ ಆಶಯಗಳ ಮೇಲೆ ಗಮನ ಹರಿಸಲಿದೆ.

**<>><><*><><<>**

ಲಕ್ಸನ್‌ಬರ್ಗ್ ಉಪಪ್ರಧಾನಿ ಹಾಗೂ ವಿದೇಶಾಂಗ ವ್ಯವಹಾರಗಳ ಸಚಿವ ಕ್ಸೇವಿಯರ್ ಬೆಟ್ಟೆಲ್ ಅವರಿಂದು ಅಧಿಕೃತ ಭಾರತ ಭೇಟಿಗಾಗಿ ನವದೆಹಲಿಗೆ ಆಗಮಿಸಿದ್ದಾರೆ. ಇಂದು ಕ್ಸೇವಿಯರ್ ಬೆಟ್ಟೆಲ್, ನವದೆಹಲಿಯಲ್ಲಿ ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ ಎಂದು ವಿದೇಶಾಂಗ ವ್ಯವಹಾರಗಳ ಸಚಿವಾಲಯ ತಿಳಿಸಿದೆ. ಸಾಮಾಜಿಕ ಮಾಧ್ಯಮ ಸಂದೇಶದಲ್ಲಿ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಭಾರತ ಮತ್ತು ಲಕ್ಸನ್‌ಬರ್ಗ್ ನಡುವಿನ ಬಹುಮುಖಿ ಸಂಬಂಧಗಳನ್ನು ಮತ್ತಷ್ಟು ಬಲಪಡಿಸಲು ಲಕ್ಸನ್‌ಬರ್ಗ್ ಉಪಪ್ರಧಾನಿಯವರ ಈ ಭೇಟಿ ಉತ್ತಮ ಅವಕಾಶ ಒದಗಿಸುತ್ತದೆ ಎಂದು ಮಾಹಿತಿ ನೀಡಿದ್ದಾರೆ.

**<>><><*><><<>**

ಉರ್ದು ದಿನಪತ್ರಿಕೆಯ ಪ್ರಕಾಶನ ಸಂಸ್ಥೆ ಅಕ್ಬರ್ ಎ ಮಶ್ರಿತ್ ಪ್ರೈವೇಟ್ ಲಿಮಿಟೆಡ್ ಹಾಗೂ ಇದರ ನಿರ್ದೇಶಕ ತೃಣಮೂಲ ಕಾಂಗ್ರೆಸ್-ಟಿಎಂಸಿ ಸಂಸದ ನದೀಮುಲ್ ಹಕ್ ಅವರಿಗೆ ಸಂಬಂಧಿಸಿದ ಕೋಲ್ಕತ್ತಾ, ದೆಹಲಿ ಮತ್ತು ರಾಂಚಿಯ ಏಳು ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ-ಇಡಿ ಶೋಧ ಕಾರ್ಯಾಚರಣೆ ನಡೆಸಿದೆ. ಬಿಧಾನ್‌ನಗರ ಪೊಲೀಸ್ ಕಮಿಷನರೇಟ್ ದಾಖಲಿಸಿದ್ದ ಎಫ್‌ಐಆರ್ ಆಧಾರದ ಮೇಲೆ ಜಾರಿ ನಿರ್ದೇಶನಾಲಯವು ಜಾರಿ ಪ್ರಕರಣ ಮಾಹಿತಿ ವರದಿಯನ್ನು ದಾಖಲಿಸಿಕೊಂಡು ಈ ಕ್ರಮ ಕೈಗೊಂಡಿದೆ. ಸಮುದಾಯಗಳ ನಡುವೆ ಸೌಹಾರ್ದತೆ

ಕದಡುವಂತಹ ವಿಷಯಗಳನ್ನು ಪ್ರಕಟಿಸಿದ ಹಾಗೂ ಪ್ರಚಾರ ಮಾಡಿದ ಗಂಭೀರ ಆರೋಪಗಳ ಹಿನ್ನೆಲೆಯಲ್ಲಿ ಈ ತನಿಖೆ ನಡೆಯುತ್ತಿದೆ ಎಂದು ಜಾರಿ ನಿರ್ದೇಶನಾಲಯ ತಿಳಿಸಿದೆ. ಇದರ ಜೊತೆಗೆ ಅಕ್ರಮ ಹಣಕಾಸು ವಹಿವಾಟು, ಲೆಕ್ಕಕ್ಕೆ ಸಿಗದ ನಗದು ವ್ಯವಹಾರಗಳು ಹಾಗೂ ಸಂಶಯಾಸ್ಪದ ಮೂಲಗಳಿಂದ ಬಂದಿರುವ ಅನುಮಾನಾಸ್ಪದ ಧನಸಹಾಯದ ಕುರಿತು ತನಿಖಾ ಸಂಸ್ಥೆಯು ಪರಿಶೀಲನೆ ನಡೆಸುತ್ತಿದೆ.

**<>><><*><><<>**

ನ್ಯೂಯಾರ್ಕ್‌ನಲ್ಲಿ ನಡೆಯುತ್ತಿರುವ ಯುಎಸ್ ಓಪನ್, ಗ್ರ್ಯಾಂಡ್ ಸ್ಲಾಮ್ ಟೆನಿಸ್ ಟೂರ್ನಿಯ ಪುರುಷರ ಸಿಂಗಲ್ಸ್ ಹಾಗೂ ಮಹಿಳಾ ಸಿಂಗಲ್ಸ್ ವಿಭಾಗದ ಹಾಲಿ ಚಾಂಪಿಯನ್‌ಗಳಾದ ಕಾರ್ಲೋಸ್ ಅಲ್ಕರಾಜ್ ಮತ್ತು ಅರಿನಾ ಸಬಲೆಂಕಾ ತಮ್ಮ ತಮ್ಮ ವಿಭಾಗದಲ್ಲಿ ಕ್ವಾರ್ಟರ್ ಫೈನಲ್ ಪ್ರವೇಶಿಸಿದ್ದಾರೆ. ಅರ್ಥರ್ ಆಶ್ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಮಹಿಳಾ ಸಿಂಗಲ್ಸ್ ಪ್ರೀಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಅರಿನಾ ಸಬಲೆಂಕ, ಅಮೆರಿಕದ ಟೇಲರ್ ಟೌನ್ ಸೆಂಡ್ ವಿರುದ್ಧ ೬-೪, ೬-೩ ಅಂತರದಲ್ಲಿ ಜಯ ದಾಖಲಿಸಿದರು. ನಾಳೆ ನಡೆಯಲಿರುವ ಕ್ವಾರ್ಟರ್ ಫೈನಲ್‌ನಲ್ಲಿ ಅವರು, ಜೆಕ್ ಗಣರಾಜ್ಯದ ಲಿಂಡಾ ನೊಸ್ಕೋವಾ ವಿರುದ್ಧ ಸೆಣಸಲಿದ್ದಾರೆ. ಪುರುಷರ ಸಿಂಗಲ್ಸ್‌ನಲ್ಲಿ ಅಲ್ಕರಾಜ್, ಅಮೆರಿಕದ ಟಾಮಿ ಪಾಲ್ ವಿರುದ್ಧ ಗೆದ್ದು, ಅಂತಿಮ ೮ರ ಘಟ್ಟ ಪ್ರವೇಶಿಸಿದ್ದು, ಸೆಮಿಫೈನಲ್‌ಗೆ ಅರ್ಹತೆ ಪಡೆಯಲು ನಾಳೆ ಅವರು, ಅಮೆರಿಕದ ಬೆನ್ ಶೆಲ್ಟನ್ ವಿರುದ್ಧ ಕಣಕ್ಕಿಳಿಯಲಿದ್ದಾರೆ.

**<>><><*><><<>**

ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆಯುತ್ತಿರುವ ದುಲೀಪ್ ಟ್ರೋಫಿ ಪ್ರಥಮ ದರ್ಜೆ ಕ್ರಿಕೆಟ್ ಪಂದ್ಯಾವಳಿಯ ಫೈನಲ್ ಪಂದ್ಯದ ೨ನೇ ದಿನದಾಟದಲ್ಲಿಂದು ದಕ್ಷಿಣ ವಲಯ ತಂಡದ ವಿರುದ್ಧ ತನ್ನ ಮೊದಲನೇ ಇನ್ನಿಂಗ್ಸ್ ಅನ್ನು ಮುಂದುವರಿಸಿರುವ ಪೂರ್ವ ವಲಯ ಕ್ರಿಕೆಟ್ ತಂಡ ಇತ್ತೀಚಿನ ವರದಿ ಬಂದಾಗ ೫ ವಿಕೆಟ್ ನಷ್ಟಕ್ಕೆ ೫೦೩ ರನ್ ಗಳಿಸಿ ಆಡುತ್ತಿದೆ.

**<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>**

**<>><><ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೨.೩೦ ಕ್ಕೆ ><><<>**